# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 486 (588)
**ಸದಸ್ಯರ ಹೆಸರು** : ಡಾ|| ತಳವಾರ್ ಸಾಬಣ್ಣ
(ನಾಮನಿರ್ದೇಶನ ಹೊಂದಿದವರು)

**ಉತ್ತರಿಸಬೇಕಾದ ದಿನಾಂಕ** : 20.02.2023
**ಉತ್ತರಿಸುವ ಸಚಿವರು** : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ ಜಿಲ್ಲೆಯಲ್ಲಿ ಕಬ್ಬು ಕಟಾವು ಮಾಡಲು ಬೇರೆ ಪ್ರದೇಶಗಳಿಂದ ಬಂದ ಕಾರ್ಮಿಕರ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿರುವುದನ್ನು ಸರ್ಕಾರ ಗಂಭೀರವಾಗಿ ತೆಗೆದುಕೊಂಡಿದೆಯೇ; | ಬೆಳಗಾವಿ ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ಕಂಡುಬಂದಿರುವುದಿಲ್ಲ. ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಕಂಡುಬಂದಿದ್ದು, ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. |
| ಆ) | ಇಂತಹ ಕಾರ್ಮಿಕ ಮಕ್ಕಳಿಗೆ ಶಿಕ್ಷಣ ಒದಗಿಸಲು ಜಿಲ್ಲೆಯಲ್ಲಿ ಎಷ್ಟು ; ಟೆಂಟ್ ಶಾಲೆಗಳನ್ನು ತೆರೆಯಲಾಗಿದೆ ಮತ್ತು ಎಷ್ಟು ಶಿಕ್ಷಕರನ್ನು ನೇಮಿಸಿಕೊಳ್ಳಲಾಗಿದೆ; | ಇಂತಹ ಕಾರ್ಮಿಕ ಮಕ್ಕಳಿಗೆ ಶಿಕ್ಷಣ ಒದಗಿಸಲು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ 04 ಟೆಂಟ್ ಶಾಲೆಗಳನ್ನು ತೆರೆಯಲಾಗಿದೆ ಹಾಗೂ 04 ಜನ ಶಿಕ್ಷಕರನ್ನು ನೇಮಿಸಲಾಗಿದೆ. |
| ಇ) | ಕಡ್ಡಾಯ ಶಿಕ್ಷಣ ಕಾಯ್ದೆ ಅಡಿಯಲ್ಲಿ ಎಲ್ಲರಿಗೂ ಶಿಕ್ಷಣ ನೀಡುವುದು ಸರ್ಕಾರದ ಜವಾಬ್ದಾರಿಯಾಗಿರುವುದರಿಂದ ಇದನ್ನು ಜಿಲ್ಲೆಯ ಶಿಕ್ಷಣ ಅಧಿಕಾರಿಗಳು ಎಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದರ ಬಗ್ಗೆ ವಿವರ ನೀಡುವುದು; | • ಅರ್ಹ ವಯೋಮಾನದ ಮಗು ಕಡ್ಡಾಯವಾಗಿ ಶಾಲೆಗೆ ದಾಖಲಾಗಲು ಕ್ರಮಕೈಗೊಳ್ಳಲಾಗಿದೆ.<br>• ದಾಖಲಾದ ಮಗು ನಿರಂತರವಾಗಿ ಶಾಲೆಗೆ ಹಾಜರಾಗುವಂತೆ ನೋಡಿಕೊಳ್ಳಲಾಗುತ್ತಿದೆ.<br>• ಶಾಲೆಗಳಿಗೆ ಅಧಿಕಾರಿಗಳು ನಿರಂತರವಾಗಿ ಸಂದರ್ಶನ ನೀಡುವಂತೆ ಸೂಚಿಸಲಾಗಿದೆ.<br>• ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡಲಾಗುವ ಎಲ್ಲಾ ಸೌಲಭ್ಯಗಳನ್ನು ಪ್ರತಿ ವಿದ್ಯಾರ್ಥಿಗೆ ದೊರಕುವಂತೆ ನೋಡಿಕೊಳ್ಳಲಾಗುತ್ತಿದೆ.<br>• ನಿರಂತರ ಶೈಕ್ಷಣಿಕ ಮೌಲ್ಯಮಾಪನ ಮಾಡಲಾಗುತ್ತಿದೆ.<br>• ಗುಣಮಟ್ಟದ ಶಿಕ್ಷಣ ನೀಡಲು ಶಿಕ್ಷಕರಿಗೆ ತರಬೇತಿ, ಮಾರ್ಗದರ್ಶನ ನೀಡಲಾಗುತ್ತಿದೆ. |
| ಈ) | ಕಬ್ಬು ಕಟಾವು ಮಾಡುವ ಕಾರ್ಮಿಕರ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಸರ್ಕಾರ ಕೈಗೊಳ್ಳಲಿರುವ ಮುಂಜಾಗ್ರತಾ ಕ್ರಮಗಳಾವುವು ? (ವಿವರ ನೀಡುವುದು) | ಬೆಳಗಾವಿ ಜಿಲ್ಲೆಯಲ್ಲಿ ಕಬ್ಬು ಕಟಾವು ಮಾಡುವ ಕಾರ್ಮಿಕರ ಮಕ್ಕಳು ಶಿಕ್ಷಣದಿಂದ ವಂಚಿತರಾಗಿರುವುದು ಕಂಡುಬರುವುದಿಲ್ಲ. ಇನ್ನಿತರೆ ವಲಸೆ ಬರುವಂತಹ ಕಾರ್ಮಿಕರ ಮಕ್ಕಳನ್ನು ಹತ್ತಿರದ ಶಾಲೆಗೆ ದಾಖಲಿಸುವ ಕಾರ್ಯವನ್ನು ಕೈಗೊಳ್ಳಲಾಗಿದೆ.<br>ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ ಕಬ್ಬು ಕಟಾವು ಮಾಡುವ ಕಾರ್ಮಿಕರ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿಯವರು ಶಾಲಾ ಕೊಠಡಿ ಮತ್ತು ಹೊರ ಸಂಪನ್ಮೂಲದಿಂದ ಶಿಕ್ಷಕರನ್ನು ಒದಗಿಸುವುದಕ್ಕೆ ಕ್ರಮಕೈಗೊಂಡಿರುತ್ತಾರೆ. |

**ಸಂಖ್ಯೆ: ಇಪಿ 11 ಪಿಎಂಎ 2023.**

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು